## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಬೂದಪೂಜಾರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, (2) ಶ್ರೀ ಆದರ್ಶ ಶೆಟ್ಟಿ ಕಾರ್ಯದರ್ಶಿ, ಮಲ್ಲಾರು ಗ್ರಾಮ ಪಂಚಾಯಿತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ ಇವರು ಸರ್ಕಾರಿ/ಸಾರ್ವಜನಿಕ ನೌಕರರಾಗಿ ದುರ್ನಡತೆ ಎಸಗಿರುವ ಕುರಿತು ವರದಿ.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರ ಪತ್ರ ಸಂಖ್ಯೆ: ಕಂಪ್ಲೆಂಟ್/ಉಪಲೋಕ್/ಎಂವೈಎಸ್/7586/2015/ಪಿಪಿ, ದಿನಾಂಕ: 28.03.2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ನಿಬಂಧಕರು ಕರ್ನಾಟಕ ಲೋಕಾಯುಕ್ತ ಇವರ ಪತ್ರದ ಸಂಗಡ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(3)ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ: 06-03-2017 ರ ವರದಿಯಲ್ಲಿ ದೂರುದಾರರಾದ ಶ್ರೀ ಸತೀಶ್ ಶೆಟ್ಟಿ ಇವರು ಶ್ರೀ ಬೂದಪೂಜಾರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, (2) ಶ್ರೀ ಆದರ್ಶ ಶೆಟ್ಟಿ ಕಾರ್ಯದರ್ಶಿ, ಮಲ್ಲಾರು ಗ್ರಾಮ ಪಂಚಾಯಿತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ದುರ್ನಡತೆ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದೇವೆ. ಸದರಿಯವರು ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಈ ಕೆಳಕಂಡ ಅಂಶಗಳು ಕಂಡುಬಂದಿವೆ ಎಂದು ತಿಳಿಸಿರುತ್ತಾರೆ.

ಈ ಪ್ರಕರಣದ ಎದುರುದಾರರುಗಳು, ದೂರುದಾರರ ಮತ್ತು ಇತರರ ವಿರುದ್ಧ ನ್ಯಾಯಾಲಯದಲ್ಲಿ ಖಾಸಗಿ ದೂರನು ದಾಖಲಿಸಿದ್ದು, ದಿನಾಂಕ 30-10-2014 ರಂದು ನ್ಯಾಯಾಲಯದಲ್ಲಿ ಹಾಜರಾಗಿರುತ್ತಾರೆ. ಆದರೆ, ಅದೇ ದಿನ ಕಛೇರಿಯ ಹಾಜರಾತಿ ಪುಸ್ತಕದಲ್ಲಿ ಸಹಿ ಮಾಡಿ, ಹಾಜರಿರುವುದಾಗಿ ತೋರಿಸಿರುತ್ತಾರೆ. ಸದರಿ ದಿನಾಂಕದಂದು ನ್ಯಾಯಾಲಯಕ್ಕೆ ಹಾಜರಾಗಲು ಮೇಲಾಧಿಕಾರಿಗಳ ಅನುಮತಿ ಪಡೆದಿರುವುದಿಲ್ಲ. ಆದ್ದರಿಂದ ಎದುರುದಾರರ ವಿರುದ್ಧ ಕ್ರಮ ಜರುಗಿಸಬೇಕೆಂದು ಕೋರಿರುತ್ತಾರೆ ಎಂದು ಮಾನ್ಯ ಉಪಲೋಕಾಯುಕ್ತರು ತಮ್ಮ ವರದಿಯಲ್ಲಿ ತಿಳಿಸಿರುತ್ತಾರೆ.

ಸದರಿ ದೂರಿನ ಆಧಾರದ ಮೇಲೆ ಎದುರುದಾರರ ಆಕ್ಷೇಪಣೆಯನ್ನು ಕರೆಯಲಾಗಿದ್ದು, ಎದುರುದಾರರುಗಳು ತಮ್ಮ ಆಕ್ಷೇಪಣೆಯನ್ನು ಸಲ್ಲಿಸಿರುತ್ತಾರೆ. ಸದರಿ ಆಕ್ಷೇಪಣೆಯಲ್ಲಿ ದೂರುದಾರರಾದ ಶ್ರೀ ಸತೀಶ್ ಶೆಟ್ಟಿಯವರು ಮಲ್ಲಾರು ಗ್ರಾಮ ಪಂಚಾಯತಿಯ ಮಾಜಿ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರಾಗಿದ್ದು, ಇವರು ಪಂಚಾಯತಿಯ ಕಛೇರಿಯಲ್ಲಿಯೇ ಸಾರ್ವಜನಿಕರನ್ನು ಕರೆದುಕೊಂಡು ಬಂದು ಭೂವ್ಯವಹಾರ, ಭೂ ಪರಿವರ್ತನೆ, ಕಟ್ಟಡದ ಲೈಸೆನ್ಸ್‌ಗೆ ಅರ್ಜಿ ಬರೆಯುವುದು ಹಾಗೂ ಇನ್ನಿತರೆ ದಂಧೆಗಳನ್ನು ನಡೆಸುತ್ತಿದ್ದು, ಈ ಬಗ್ಗೆ ಪಂಚಾಯಿತಿಯಲ್ಲಿ ಸರ್ಕಾರಿ ಕೆಲಸ ನಿರ್ವಹಿಸಲು ಸಮಸ್ಯೆ ಆದ ಕಾರಣ "(1) ತಮ್ಮ ಕೆಲಸಗಳನ್ನು ತಾವೇ ಬಂದು ಮಾಡಿಸಿಕೊಳ್ಳಿ; (2) ಕಛೇರಿ ಕೆಲಸಗಳಿಗೆ ಮಧ್ಯವರ್ತಿಗಳಿಗೆ ಅವಕಾಶವಿಲ್ಲ (3) ಕಛೇರಿಯಲ್ಲಿ ಶಿಸ್ತು ಪಾಲಿಸಿರಿ (4) ಕಛೇರಿಯಲ್ಲಿ ಕೆಲಸ ಇದ್ದರೆ ಮಾತ್ರ ಪಂಚಾಯತಿ ಅಭಿವೃದ್ಧಿ ಅಧಿಕಾರಿ/ಕಾರ್ಯದರ್ಶಿಯವರನ್ನು ಭೇಟಿ ಮಾಡಿ, ಅನಗತ್ಯವಾಗಿ ಕಛೇರಿ ಕೆಲಸಕ್ಕೆ ಅಡ್ಡಿ ಮಾಡದಿರಿ, ಗ್ರಾಮ ಪಂಚಾಯತಿಯ ಪಿಡಿಓ ಮತ್ತು ಕಾರ್ಯದರ್ಶಿಯವರ ಮೇಲೆ ಜನರನ್ನು ಎತ್ತಿಕಟ್ಟಿ, ದಿನಪತ್ರಿಕೆಯಲ್ಲಿ ಅಪಪ್ರಚಾರ ಮಾಡಿಸಿದರು, ಇದಲ್ಲದೇ, ಮೇಲಧಿಕಾರಿಗಳಿಗೆ ಸುಳ್ಳು ಮಾಹಿತಿ ನೀಡಿ ತನಿಖೆ ನಡೆಸಿರುತ್ತಾರೆ. ಮಲ್ಲಾರು ಗ್ರಾಮ ಪಂಚಾಯಿತಿಯಲ್ಲಿ ಒಟ್ಟು 16 ಜನ ಸದಸ್ಯರಿದ್ದು, ಒಬ್ಬ ಸದಸ್ಯರನ್ನು ಹೊರತುಪಡಿಸಿ ಶ್ರೀ ಸತೀಶ್ ಶೆಟ್ಟಿಯವರು ಮಾಡುತ್ತಿದ್ದ ಸುಳ್ಳು ಆಪಾದನೆಗಳನ್ನು ಪಂಚಾಯತಿಯ ಸಾಮಾನ್ಯ ಸಭೆಯಲ್ಲಿ ಖಂಡಿಸಿ ಸಂಬಂಧಪಟ್ಟ ಇಲಾಖೆಗೆ ಪತ್ರ ಬರೆಯಲಾಗಿದೆ. ಇದಲ್ಲದೇ, ದೂರುದಾರರಾದ ಶ್ರೀ ಸತೀಶ್ ಶೆಟ್ಟಿಯವರು ಗ್ರಾಮದಲ್ಲಿ ಇನ್ನಿತರೆ ಅನೈತಿಕ ಚಟುವಟಿಕೆ ಹಾಗೂ ಭೂ ಕಬಳಿಕೆ ದಂಧೆಯಲ್ಲಿ ತೊಡಗಿದ್ದು, ಇವರ ವಿರುದ್ಧ ನ್ಯಾಯಾಲಯದಲ್ಲಿ ಪ್ರಕರಣಗಳು ದಾಖಲಾಗಿರುತ್ತವೆ. ಇವರ ದಂಧೆಗೆ ಅಡ್ಡ ಬಂದ ಪಿಡಿಓ/ಕಾಯದರ್ಶಿಯವರನ್ನು ರಾಜಕೀಯ ಪ್ರೇರಣೆಯಿಂದ ವರ್ಗಾವಣೆ ಮಾಡಿಸುವುದು ಸಹ ಇವರ ಅಬ್ಯಾಸವಾಗಿರುತ್ತದೆ. ಅದೇ ರೀತಿ ಎದುರುದಾರರುಗಳಾದ ತಮ್ಮನ್ನು ಸಹ ವರ್ಗಾವಣೆಗೆ ಹುನ್ನಾರ ನಡೆಸಿದಾಗ ಪಂಚಾಯಿತಿಯ 15 ಜನ ಸದಸ್ಯರು ಹಾಗೂ ಗ್ರಾಮಸ್ಥರು ಪ್ರತಿಭಟನೆ ಮಾಡಿರುತ್ತಾರೆ. ವರ್ಗಾವಣೆಯ ಕಾಲ ಮುಗಿದ ನಂತರ ದೂರುದಾರರು ತಮ್ಮಗಳ ವಿರುದ್ಧ ದಿನಪತ್ರಿಕೆಗಳಲ್ಲಿ ಇಲ್ಲಸಲ್ಲದ ಮಾನಹಾನಿ ಮಾಡುವಂತಹ ವರದಿಗಳನ್ನು ವರದಿಸಿರುತ್ತಾರೆ ಈ ಹಿನ್ನೆಲೆಯಲ್ಲಿ, ತಾವುಗಳು ತಮ್ಮ ರಕ್ಷಣೆಯ ಹಿತದೃಷ್ಟಿಯಿಂದ ಶ್ರೀ ಸತೀಶ್ ಶೆಟ್ಟಿಯವರು ಹಾಗೂ ಇವರಿಗೆ ಸಹಕಾರ ನೀಡಿದವ ಮೇಲೆ ನ್ಯಾಯಾಲದಲ್ಲಿ ಫಿರ್ಯಾದನ್ನು ಸಲ್ಲಿಸಲಾಗಿರುತ್ತದೆ ಎಂದು ತಿಳಿಸಿರುತ್ತಾರೆಂದು ತಮ್ಮ ವರದಿಯಲ್ಲಿ ತಿಳಿಸಿರುತ್ತಾರೆ

ಈ ಎಲ್ಲ ಅಂಶಗಳನ್ನು ಪರಿಶೀಲಿಸಿದಲ್ಲಿ ಎದುರುದಾರರುಗಳು ದಿ: 30/10/2014ರಂದು 2ನೇ ಹೆಚ್ಚುವರಿ ಸಿವಿಲ್ ನ್ಯಾಯಾಲಯ ಮತ್ತು ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಉಡುಪಿ ಇಲ್ಲ ಖಾಸಗಿ ದೂರು ಸಂ:

609/2014 ಅನ್ನು ದಿ:30/10/2014 ರಂದು ಸಲ್ಲಿಸಿದ್ದು, ಸದರಿಯವರುಗಳು ಆ ದಿನ ನ್ಯಾಯಾಲಯದಲ್ಲಿ ಹಾಜರಿದ್ದರೆಂದು, ನ್ಯಾಯಾಲಯದಲ್ಲಿ ಹಾಜರು ಪಡಿಸಿರುವ ದೂರಿನ ಪ್ರತಿಯಿಂದ ಕಂಡು ಬರುತ್ತದೆ. ಮಲ್ಲಾರು ಗ್ರಾಮಪಂಚಾಯತಿಯ ಹಾಜರಾತಿ ಪುಸ್ತಕದಲ್ಲಿ ದಿ: 30/10/2014 ರಂದು ಶ್ರೀ ಆದರ್ಶ ಶೆಟ್ಟಿಯವರು ಗ್ರಾಮ ಪಂಚಾಯತಿ ಕರ್ತವ್ಯಕ್ಕೆ ಹಾಜರಾಗಿ, ಹಾಜರಾತಿ ಪುಸ್ತಕದಲ್ಲಿ ಸಹಿ ಮಾಡಿರುವುದು ಸ್ಪಷ್ಟ ಪಟ್ಟಿರುತ್ತದೆ. ಶ್ರೀ ಬೂದಾ ಪೂಜಾರಿ, ದಿ: 30/10/2014 ರಂದು ಒಒಡಿ ಮೇಲೆ ತರಬೇತಿ ಶಿಬಿರಕ್ಕೆ ಹಾಜರಾಗಿರುವುದು ದೂರುದಾರರು ಹಾಜರುಪಡಿಸಿರುವ ದಾಖಲೆಯಿಂದ ಸ್ಪಷ್ಟ ಪಟ್ಟಿರುತ್ತದೆ. ಹೀಗಿರುವಲ್ಲಿ ದಿ: 30/10/2014 ರಂದು ಖಾಸಗಿ ದೂರನ್ನು ಸಲ್ಲಿಸಲು ನ್ಯಾಯಾಲಯದಲ್ಲಿ ದೂರುದಾದರರುಗಳಾದ ಶ್ರೀ ಬೂದಾ ಪೂಜಾರಿ ಹಾಗೂ ಶ್ರೀ ಆದರ್ಶ ಶೆಟ್ಟಿಯವರು ಹಾಜರಿರುವ ಬಗ್ಗೆ ನ್ಯಾಯಾಲಯದಲ್ಲಿ ಪಡೆದಿರುವ ದಾಖಲೆಯಲ್ಲಿ ಮಾನ್ಯ ನ್ಯಾಯಾಧೀಶರು ನಮೂದಿಸಿರುವುದು ಸ್ಪಷ್ಟ ಪಟ್ಟಿರುತ್ತದೆ. ಈ ಎಲ್ಲ ದಾಖಲೆಗಳನ್ನು ಪರಿಶೀಲಿಸಿದಲ್ಲಿ ಎದುರುದಾರರುಗಳು ಮೇಲೆ ಹೇಳಿದ ಪ್ರಕರಣವನ್ನು ದಾಖಲಿಸಲು, ನ್ಯಾಯಾಲಯಕ್ಕೆ ಹಾಜರಾಗಲು ಮೇಲಧಿಕಾರಿಗಳ ಅನುಮತಿಯನ್ನು ಪಡೆಯದೆ ಹಾಜರಾಗಿ ಕರ್ತವ್ಯಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆಂದು ತಿಳಿಸಿರುತ್ತಾರೆ

ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಶ್ರೀ ಬೂದಪೂಜಾರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, (2) ಶ್ರೀ ಆದರ್ಶ ಶೆಟ್ಟಿ, ಕಾರ್ಯದರ್ಶಿ, ಮಲ್ಲಾರು ಗ್ರಾಮ ಪಂಚಾಯಿತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ ಇವರು ಸಾರ್ವಜನಿಕ/ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೆ ದುರ್ನಡತೆ ಎಸಗಿ, ಸಾರ್ವಜನಿಕ/ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ನಿಯಮ 3(1)(ii) ಮತ್ತು (iii) ರನ್ವಯ ದುರ್ನಡತೆಯೆಸಗಿದ್ದು, ಶಿಸ್ತು ಕ್ರಮಕ್ಕೆ ಭಾಧ್ಯರಾಗಿರುವುದು ಕಂಡು ಬಂದಿರುವುದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(3) ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ, ಎದುರುದಾರರುಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಹಾಗೂ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11-ಎ ರಡಿಯಲ್ಲಿ ಸದರಿಯವರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/281/ಗ್ರಾಪಂಕಾ/2017 ಬೆಂಗಳೂರು, ದಿನಾಂಕ16-05-2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಬೂದಪೂಜಾರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, (2) ಶ್ರೀ ಆದರ್ಶ ಶೆಟ್ಟಿ, ಕಾರ್ಯದರ್ಶಿ, ಮಲ್ಲಾರು ಗ್ರಾಮ ಪಂಚಾಯಿತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು ಆಪಾದಿತರಿಗೆ, ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು,ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.(ಇದರೊಂದಿಗೆ ಈ ಪ್ರಕರಣದ ಮೂಲ ದಾಖಲಾತಿಯನ್ನು ಪುಟ ಸಂಖ್ಯೆ 01 ರಿಂದ 27 ರವರೆಗೆ ಲಗತ್ತಿಸಿ ಹಿಂದಿರುಗಿಸಲಾಗಿದೆ.)
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಉಡುಪಿ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ.
6. ಶ್ರೀ ಬೂದಪೂಜಾರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಮಲ್ಲಾರು ಗ್ರಾಮ ಪಂಚಾಯಿತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ
7. ಶ್ರೀ ಆದರ್ಶ ಶೆಟ್ಟಿ, ಕಾರ್ಯದರ್ಶಿ, ಮಲ್ಲಾರು ಗ್ರಾಮ ಪಂಚಾಯಿತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ
8. ಗಣಕ ಕೋಶ
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.